All India Radio: Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

09.08.2025 6.40 P.M.

<><><><>

ಮುಖ್ಯಾಂಶಗಳು

- ಬೆಂಗಳೂರಿನಲ್ಲಿ ನಮ್ಮ ಮೆಟ್ರೋ ಹಳದಿ ಮಾರ್ಗ ಸೇರಿದಂತೆ ಹಲವು ರೈಲ್ವೆ ಯೋಜನೆಗಳಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ನಾಳೆ ಚಾಲನೆ
- ಗ್ಯಾರಂಟಿ ಯೋಜನೆಗಳಿಂದ ಹೆಚ್ಚಿದ ತಲಾದಾಯ; ನೀಗಿದ ಆರ್ಥಿಕ ಅಸಮಾನತೆ - ಮುಖ್ಯಮಂತ್ರಿ ಸಿದ್ದರಾಮಯ್ಯ
- ಹರ್‌ಘರ್ ತಿರಂಗಾ ಅಭಿಯಾನಕ್ಕೆ ನರಗುಂದದಲ್ಲಿ ಇಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಚಾಲನೆ
- ರಾಜ್ಯದ ವಿವಿಧೆಡೆ ಶಿವಶರಣ ನುಲಿಯ ಚಂದಯ್ಯ ಜಯಂತಿ ಆಚರಣೆ

><><><><><><><><

ಪ್ರಧಾನಮಂತ್ರಿ ನರೇಂದ್ರ ಮೋದಿ ನಾಳೆ ರಾಜ್ಯಕ್ಕೆ ಒಂದು ದಿನದ ಭೇಟಿ ನೀಡಲಿದ್ದಾರೆ. ಈ ಸಂದರ್ಭದಲ್ಲಿ ಬೆಂಗಳೂರಿನ ಕೆಎಸ್‌ಆರ್ ರೈಲ್ವೆ ನಿಲ್ದಾಣದಲ್ಲಿ ಮೂರು ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳ ಸಂಚಾರಕ್ಕೆ ಹಸಿರು ನಿಶಾನೆ ತೋರಲಿದ್ದಾರೆ. ಬೆಂಗಳೂರು-ಬೆಳಗಾವಿ, ಅಮೃತಸರ-ಶ್ರೀಮಾತಾ ವೈಷ್ಣೋದೇವಿ ಕತ್ರಾ ಹಾಗೂ ನಾಗ್ಪುರ-ಪುಣೆ ವಂದೇ ಭಾರತ್ ಎಕ್ಸ್‌ಪ್ರೆಸ್‌ಗಳು ಇವುಗಳಲ್ಲಿ ಸೇರಿವೆ. ನಂತರ ಪ್ರಧಾನಿಯವರು ಬೆಂಗಳೂರು ನಮ್ಮ ಮೆಟ್ರೋ ಹಳದಿ ಮಾರ್ಗದ ಕಾರ್ಯಾಚರಣೆಗೆ ಚಾಲನೆ ನೀಡಿ, ಆರ್.ವಿ. ರಸ್ತೆಯ ಮೆಟ್ರೋ ನಿಲ್ದಾಣದಿಂದ ರಾಗಿಗುಡ್ಡ ಮಾರ್ಗವಾಗಿ ಎಲೆಕ್ಟ್ರಾನಿಕ್ ಸಿಟಿ ಮೆಟ್ರೋ ನಿಲ್ದಾಣದವರೆಗೆ ಪ್ರಯಾಣಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಪ್ರಧಾನಿಯವರು ವಿವಿಧ ನಗರ ಸಂಪರ್ಕ ಯೋಜನೆಗಳಿಗೆ ಶಿಲಾನ್ಯಾಸ ಹಾಗೂ ಉದ್ಘಾಟನೆ ನೆರವೇರಿಸಿ ಸಾರ್ವಜನಿಕರನ್ನು ಉದ್ದೇಶಿಸಿ ಮತನಾಡಲಿದ್ದಾರೆ. ಪ್ರಧಾನಿಯವರು, ಸುಮಾರು ೧೫ ಸಾವಿರದ ೬೧೧ ಕೋಟಿ ರೂಪಾಯಿ ವೆಚ್ಚದ ಬೆಂಗಳೂರು ಮೆಟ್ರೋ ೩ನೇ ಹಂತದ ಯೋಜನೆಗೂ ಶಿಲಾನ್ಯಾಸ ನೆರವೇರಿಸಲಿದ್ದಾರೆ. ಸುಮಾರು ೪೪ ಕಿಲೋಮೀಟರ್ ಉದ್ದದ ಈ ಮಾರ್ಗ ೩೧ - ಎತ್ತರದ ನಿಲ್ದಾಣಗಳನ್ನು ಹೊಂದಿರಲಿದೆ.

><><><><><><><><

ಸಮಾಜದಲ್ಲಿ ಎಲ್ಲರಿಗೂ ಸಮಾನವಾದ ಅವಕಾಶಗಳು ದೊರೆಯಬೇಕು. ಸಮಾಜದಲ್ಲಿ ಇರುವ ಆರ್ಥಿಕ ಅಸಮಾನತೆಯನ್ನು ಹೋಗಲಾಡಿಸುವ ನಿಟ್ಟಿನಲ್ಲಿ ನಮ್ಮ ಸರ್ಕಾರ ಗ್ಯಾರೆಂಟಿ ಯೋಜನೆಗಳನ್ನು ಒಳಗೊಂಡು ಹಲವು ಯೋಜನೆಗಳನ್ನು ಜಾರಿಗೆ ತಂದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಇಂದು ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್, ವರುಣಾ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ೧ ಸಾವಿರ ಕೋಟಿಗೂ ಅಧಿಕ ಮೌಲ್ಯದ ವಿವಿಧ ಇಲಾಖೆಗಳ ಅಭಿವೃದ್ಧಿ ಕಾಮಗಾರಿಗಳ ಶಂಕು ಸ್ಥಾಪನೆ, ಲೋಕಾರ್ಪಣೆ ಹಾಗೂ ಫಲಾನುಭವಿಗಳಿಗೆ ಸವಲತ್ತು ವಿತರಣಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ೨೦೨೩ ರ ಚುನಾವಣಾ ಸಂಧರ್ಭದಲ್ಲಿ

ನೀಡಲಾದ ೫ ಗ್ಯಾರೆಂಟಿ ಯೋಜನೆಗಳನ್ನು ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣ ಜಾರಿಗೆ ತಂದು ಬಡವರ ಏಳಿಗೆಗೆ ಆರ್ಥಿಕ ಅಸಮಾನತೆ ಹೋಗಲಾಡಿಸಲು ಕ್ರಮ ವಹಿಸಲಾಗಿದೆ. ಗ್ಯಾರಂಟಿ ಯೋಜನೆಗಳಿಗೆ ವಾರ್ಷಿಕ ೫೫ ಸಾವಿರ ಕೋಟಿ ವೆಚ್ಚ ಮಾಡಲಾಗುತ್ತಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.  ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದ ಮೇಲೆ ರಾಜ್ಯ ತಲಾ ಆದಾಯದಲ್ಲಿ ಮೊದಲ ಸ್ಥಾನದಲ್ಲಿದೆ. ಗ್ಯಾರಂಟಿ ಯೋಜನೆಗಳಿಂದ ಜನರ ಕೈಗೆ ಹಣ ದೊರೆತು ಆರ್ಥಿಕ ಚಟುವಟಿಕೆಗಳು ಹೆಚ್ಚಾದವು. ಇದರಿಂದ ತಲಾ ಆದಾಯ ಹೆಚ್ಚಾಗಿದೆ. ಜಿಎಸ್‌ಟಿ ತೆರಿಗೆ ಪಾವತಿಯಲ್ಲಿ ಕರ್ನಾಟಕ ರಾಜ್ಯ ಎರಡನೇ ಸ್ಥಾನದಲ್ಲಿದೆ ಎಂದು ತಿಳಿಸಿದರು.

><><><><><><><><><

ಭಾರತ ದೇಶದ ರಕ್ಷಣಾ ವ್ಯವಸ್ಥೆಯನ್ನು ಸಶಕ್ತಗೊಳಿಸುವ ಐದು ಸಾವಿರ ರಕ್ಷಣಾ ವ್ಯವಸ್ಥೆಯ ಉಪಕರಣಗಳನ್ನು ತಯಾರಿಸಲು ಎಂಎಸ್‌ಎಂಇ ಅನುಮತಿಯನ್ನು ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ನೀಡಿದ್ದಾರೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ.

ಧ್ವನಿ  : ಪ್ರಲ್ಹಾದ್ ಜೋಶಿ, ಕೇಂದ್ರ ಸಚಿವರು

ಗದಗ ಜಿಲ್ಲೆಯ ನರಗುಂದ ಪಟ್ಟಣದಲ್ಲಿ ಇಂದು ಹರ್ ಘರ್ ತಿರಂಗಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಭಯೋತ್ಪಾದನೆ ಮುಕ್ತ ರಾಷ್ಟ್ರ ನಿರ್ಮಾಣ ಮಾಡುವುದಕ್ಕೆ ಸರ್ಕಾರ ಬದ್ಧವಾಗಿದೆ ಎಂದು ಅವರು ತಿಳಿಸಿದ್ದಾರೆ.  ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಶಾಸಕರಾದ ಸಿ.ಸಿ.ಪಾಟೀಲ, ಡಾ ಚಂದ್ರು ಲಮಾಣಿ, ಅರವಿಂದ ಬೆಲ್ಲದ, ಮಹೇಶ ಟೆಂಗಿನಕಾಯಿ ಸೇರಿದಂತೆ ಹಲವು ಗಣ್ಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

><><><><><><><><><

ಶಿವ ಶರಣ ನುಲಿಯ ಚಂದಯ್ಯನವರು ತಮ್ಮ ವಚನಗಳ ಮೂಲಕ ಸಮಾಜಕ್ಕೆ ಉತ್ತಮ ಸಂದೇಶ ನೀಡಿದ್ದಾರೆ ಎಂದು  ಕಾನೂನು, ಸಂಸದೀಯ ವ್ಯವಹಾರ ಹಾಗೂ ಪ್ರವಾಸೋದ್ಯಮ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ಗದಗನಲ್ಲಿ ತಿಳಿಸಿದರು.  ಗದಗ ಜಿಲ್ಲಾಡಳಿತ ಭವನದಲ್ಲಿ ಜರುಗಿದ ನುಲಿಯ ಚಂದಯ್ಯನವರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ನುಲಿಯ ಚಂದಯ್ಯನವರು ತಮ್ಮ ಅರ್ಥಪೂರ್ಣ ವಚನಗಳ ಮೂಲಕ ಸಮಾಜದ ಅಂಕುಡೊಂಕುಗಳನ್ನು ತಿದ್ದುವಲ್ಲಿ ಶ್ರಮಿಸಿದ್ದಾರೆ ಎಂದರು.  ಕಾಯಕತತ್ವದ ಮಹತ್ವ ಸಾರಿದ ನುಲಿಯ ಚಂದಯ್ಯನವರ ಜಯಂತ್ಯೋತ್ಸವದ ಅಂಗವಾಗಿ ವಿಜಯಪುರ ನಗರದ ಸಿದ್ದೇಶ್ವರ ದೇವಸ್ಥಾನದ ಆವರಣದಲ್ಲಿ ನುಲಿಯ ಚಂದಯ್ಯ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಮೆರವಣಿಗೆಗೆ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ್ ಚಾಲನೆ ನೀಡಿದರು. ನಂತರ ಮಾತನಾಡಿದ ಡಾ.ಎಂ.ಬಿ.ಪಾಟೀಲ್ , ಕಾಯಕ ಶರಣರ ತತ್ವಾದರ್ಶಗಳು ಸಾರ್ವಕಾಲಕ್ಕೂ ಪ್ರಸ್ತುತವಾಗಿವೆ. ಶರಣರ  ಕಾಯಕ ಕಲ್ಪನೆಯ ತತ್ವಾದರ್ಶ ಜೀವನ ಸಂದೇಶದ ಬಹುಮೂಲ್ಯ ವಿಷಯಗಳನ್ನು ಜನಸಾಮಾನ್ಯರು ತಮ್ಮ ಬದುಕಿನಲ್ಲಿ ಅಳವಡಿಕೊಂಡು ಶರಣರು ತೋರಿದ ಮಾರ್ಗದಲ್ಲಿ ಸಾಗಬೇಕು ಎಂದು ಹೇಳಿದರು.

><><><><><><><><><

ವಿಜಯಪುರ ಜಿಲ್ಲೆಯಲ್ಲಿ ಮಳೆಯಿಂದ ಹಾನಿಗೊಳಗಾದ ಗ್ರಾಮೀಣ ರಸ್ತೆ, ಕೃಷಿ, ತೋಟಗಾರಿಕೆ ಬೆಳೆಗಳು, ಜನ-ಜಾನುವಾರುಗಳ ಹಾನಿ ಕುರಿತಂತೆ ಸಮಗ್ರ ಸಮೀಕ್ಷೆ ನಡೆಸಿ ಪರಿಹಾರೋಪಾಯ

ಕ್ರಮಗಳನ್ನು ಕೈಗೊಳ್ಳುವಂತೆ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟಿಲ್ ಸೂಚನೆ ನೀಡಿದ್ದಾರೆ. ವಿಜಯಪುರದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಹಾಳಾಗಿರುವ ರಸ್ತೆಗಳ ಕುರಿತು ಪರಿಶೀಲನೆ ನಡೆಸಿ ಅಗತ್ಯ ಕ್ರಮ ವಹಿಸಬೇಕು. ಬೆಳೆ ಹಾನಿ ಕುರಿತು ಸಮಗ್ರವಾಗಿ ಸಮೀಕ್ಷೆ ನಡೆಸಬೇಕು. ಜಿಪಿಎಸ್ ಫೋಟೋ ಬಳಸಿ ಯಾವುದೇ ರೈತರಿಂದ ದೂರು ಬರದಂತೆ ನೋಡಿಕೊಂಡು ಎಚ್ಚರಿಕೆ ವಹಿಸಬೇಕು. ಯಾವುದೇ ರೈತರಿಂದ ದೂರುಗಳು ಬಂದಲ್ಲಿ ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿಸಲಾಗುವುದು ಎಂದು ಎಂ.ಬಿ.ಪಾಟೀಲ್ ಎಚ್ಚರಿಕೆ ನೀಡಿದ್ದಾರೆ. ವಿಜಯಪುರ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರವಾಹ ಪರಿಸ್ಥಿತಿ ಮರುಕಳಿಸದಂತೆ ಎಚ್ಚರಿಕೆ ವಹಿಸಿ, ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಜಿಲ್ಲೆಯ ಆಲಮಟ್ಟಿ ಜಲಾಶಯಲ್ಲಿ ಒಳಹರಿವು ಹೆಚ್ಚಾಗಿರುವುದರಿಂದ ಜಲಾಶಯದಿಂದ ನೀರು ಹೊರಬಿಡಲಾಗುತ್ತಿದೆ. ಜಿಲ್ಲೆಯಲ್ಲಿ ಅವಶ್ಯಕತೆ ಇರುವ ಕೆರೆಗಳನ್ನು ತುಂಬಿಸಲು ಈ ನೀರನ್ನು ಬಳಸಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

><><><><><><><><

'ಆಪರೇಷನ್ ಸಿಂದೂರ್' ಸಂದರ್ಭದಲ್ಲಿ ಪಾಕಿಸ್ತಾನದ ಐದು ಯುದ್ಧ ವಿಮಾನಗಳನ್ನು ಭಾರತ ಹೊಡೆದುರುಳಿಸಿದೆ ಎಂದು ವಾಯು ಸಿಬ್ಬಂದಿ ಮುಖ್ಯಸ್ಥ ಏರ್‌ಚೀಫ್ ಮಾರ್ಷಲ್ ಎ.ಪಿ.ಸಿಂಗ್ ಹೇಳಿದ್ದಾರೆ. ಅವರು ಬೆಂಗಳೂರಿನಲ್ಲಿಂದು ಏರ್‌ಚೀಫ್ ಎಲ್.ಎಂ.ಕತ್ರೆ ಸ್ಮಾರಕ ಉಪನ್ಯಾಸ ಕಾರ್ಯಕ್ರಮದಲ್ಲಿ ವಿಡಿಯೊ ತುಣುಕು ಪ್ರದರ್ಶಿಸಿ ಮಾತನಾಡಿ, ಭಾರತ, ಪಾಕಿಸ್ತಾನದ ಐದು ಜೆಟ್ ವಿಮಾನಗಳಲ್ಲದೇ ಮತ್ತೊಂದು ವಿಮಾನವನ್ನು ಹೊಡೆದುರುಳಿಸಿದೆ. ಅದು ಅವಾಕ್ಸ್ ಅಥವಾ ಎಲಿಂಟ್ ವಿಮಾನವಾಗಿರಬಹುದಾಗಿದೆ. ೩೦೦ ಕಿಲೋಮೀಟರ್‌ಗೂ ಹೆಚ್ಚಿನ ದೂರದ ವ್ಯಾಪ್ತಿಯಲ್ಲಿ ಭೂಮಿಯಿಂದ ಆಕಾಶದತ್ತ ನಡೆಸಲಾದ ಅತಿದೂರದ, ದಾಖಲೆಯ ಕಾರ್ಯಾಚರಣೆಯಾಗಿದೆ. ಭಾರತದ ಕ್ಷಿಪಣಿಗಳಿಂದ ಶಹಬಾಝ್ ಜಾಕೋಬಾದ್ ವಾಯುಕ್ಷೇತ್ರದಲ್ಲಿ ದಾಳಿ ನಡೆಸಿ, ಎಫ್-೧೬ ಗಳಂತಹ ಕೆಲ ವಿಮಾನಗಳನ್ನು ನಾಶಪಡಿಸಲಾಗಿದೆ ಎಂದು ಅವರು ತಿಳಿಸಿದರು. ಭಾರತದ ದಾಳಿ ಅತ್ಯಂತ ನಿಖರವಾಗಿ ಹಾಗೂ ರಕ್ಷಣಾ ಪಡೆಯ ಮೂರೂ ವಿಭಾಗಗಳು ಸಮನ್ವಯದಿಂದ ನಡೆಸಿದ ಕಾರ್ಯಾಚರಣೆಯಾಗಿದೆ ಎಂದು ಅವರು ಹೇಳಿದರು.

><><><><><><><><

ರಾಯಚೂರಿನಲ್ಲಿ ನಡೆದ ಅಗ್ನಿವೀರ್ ಸೇನಾ ಭರ್ತಿ ಪ್ರಕ್ರಿಯೆ ಎರಡನೇ ದಿನವಾದ ಇಂದು ದೈಹಿಕ ಪರೀಕ್ಷೆಯಲ್ಲಿ ಭಾಗವಹಿಸಿದ ಆರು ಜಿಲ್ಲೆಗಳ ೮೬೦ ಅಭ್ಯರ್ಥಿಗಳಲ್ಲಿ ಪೈಕಿ ೩೭೯ ಅಭ್ಯರ್ಥಿಗಳು ಓಟದ ಪರೀಕ್ಷೆಯಲ್ಲಿ ತೇರ್ಗಡೆಯಾದರು. ರಾಯಚೂರಿನ ಅಖಿಲ ಕರ್ನಾಟಕ ಮಾಜಿ ಸೈನಿಕ ಸಂಘದ ಮಾಜಿ ಸೈನಿಕರು ರಾಯಚೂರ್ ರೈಲ್ವೆ ನಿಲ್ದಾಣದಲ್ಲಿದ್ದು, ರೈಲು ಮೂಲಕ ಸೇನಾ ಭರ್ತಿಗೆ ಆಗಮಿಸುತ್ತಿರುವ ಅಭ್ಯರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

><><><><><><><><

ಕೋಲಾರ ಜಿಲ್ಲೆಯ ವೇಮಗಲ್ ಕುರುಗಲ್ ಪಟ್ಟಣ ಪಂಚಾಯಿತಿಗೆ ಮೊದಲ ಬಾರಿಗೆ ನಡೆಯುತ್ತಿರುವ ೧೬ ಸ್ಥಾನಗಳಿಗೆ ೫೧ ಜನ ಚುನಾವಣಾ ಅಖಾಡದಲ್ಲಿದ್ದಾರೆ ಎಂದು ಚುನಾವಣಾಧಿಕಾರಿ ಶಿವಾರೆಡ್ಡಿ ತಿಳಿಸಿದ್ದಾರೆ. ಒಂದರಿಂದ ೯ನೇ ವಾರ್ಡ್‌ಗೆ ಸಲ್ಲಿಸಿದ್ದ ೩೬ ಮಂದಿಯಲ್ಲಿ ೧೨ ನಾಮಪತ್ರ ವಾಪಸ್ ಪಡೆದಿದ್ದು, ೨೪ ಜನ ಕಣದಲ್ಲಿದ್ದಾರೆ. ೧೦ ರಿಂದ ೧೬ನೇ

ವಾರ್ಡ್‌ಗಳಲ್ಲಿ ಸಲ್ಲಿಸಿದ್ದ ೪೭ ನಾಮಪತ್ರಗಳಲ್ಲಿ ೨೦ ನಾಮಪತ್ರಗಳನ್ನು ವಾಪಸ್ ಪಡೆದಿದ್ದು, ೨೭ ಜನ ಕಣದಲ್ಲಿದ್ದಾರೆ.

><><><><><><><><><

ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ೨೦೨೪-೨೫ನೇ ಸಾಲಿನಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆ ೩೩.೭೮ ಲಕ್ಷ ಮಾನವ ದಿನಗಳನ್ನು ಸೃಜಿಸಿ ಶೇಕಡ ೧೧೨.೬ ರಷ್ಟು ಸಾಧನೆ ಮಾಡುವ ಮೂಲಕ ಮಾನವ ದಿನಗಳ ಸೃಜನೆಯಲ್ಲಿ ರಾಜ್ಯದಲ್ಲಿಯೇ ೫ನೇ ಸ್ಥಾನದಲ್ಲಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಡಾ.ವೈ.ನವೀನ್ ಭಟ್ ಹೇಳಿದ್ದಾರೆ.

><><><><><><><><><

ಬಾಣಂತಿಯರ ಆರೋಗ್ಯ ಕ್ಷೇಮಕ್ಕಾಗಿ, ನಿರಂತರ ತಪಾಸಣೆಗೆ ಪ್ರೋತ್ಸಾಹಿಸಿ ಕೇಂದ್ರ ಸರ್ಕಾರ ಮಾತೃವಂದನಾ ಯೋಜನೆಯನ್ನು ಮಹಿಳೆಯರಿಗೆ ಕೊಡುಗೆಯಾಗಿ ನೀಡಿದೆ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸಿಂಧು ಅಂಗಡಿ ಹೇಳಿದರು. ಹೊಸಪೇಟೆ ತಾಲೂಕಿನ ಹಳೇ ಮಲಪನಗುಡಿಯಲ್ಲಿ ಹಮ್ಮಿಕೊಂಡಿದ್ದ ಮಾತೃವಂದನಾ ಶಿಬಿರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಪ್ರಧಾನಮಂತ್ರಿ ಮಾತೃವಂದನಾ ಯೋಜನೆ ಭಾರತ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯದ ಕೇಂದ್ರ ಪ್ರಾಯೋಜಿತ ಪ್ರಮುಖ ಯೋಜನೆಯಾಗಿದ್ದು, ಗರ್ಭಿಣಿಯರು ಮತ್ತು ಹಾಲುಣಿಸುವ ತಾಯಂದಿರನ್ನು ಬೆಂಬಲಿಸಲು ವಿನ್ಯಾಸಗೊಳಿಸಲಾಗಿದೆ. ಸಾಮಾಜಿಕ ಮತ್ತು ಆರ್ಥಿಕವಾಗಿ ಹಿಂದುಳಿದ ವರ್ಗಗಳಿಗೆ ಸೇರಿದ ಮಹಿಳೆಯರಿಗೆ ಹೆರಿಗೆ ಸೌಲಭ್ಯಗಳನ್ನು ಒದಗಿಸುತ್ತದೆ. ನಗದು ಪ್ರೋತ್ಸಾಹ ಧನವಾಗಿ ೫ ಸಾವಿರ ರೂಪಾಯಿ ನೀಡಲಾಗುತ್ತದೆ. ಈ ಯೋಜನೆಯಡಿ ಈವರೆಗೆ ೪ ಕೋಟಿಗೂ ಅಧಿಕ ಮಹಿಳೆಯರು ಪ್ರಯೋಜನ ಪಡೆದುಕೊಂಡಿದ್ದಾರೆ ಎಂದು ಸಿಂಧು ಅಂಗಡಿ ಮಾಹಿತಿ ನೀಡಿದರು.

><><><><><><><><><

ನೈಋತ್ಯ ಮುಂಗಾರು ಒಳನಾಡಿನಲ್ಲಿ ಸಕ್ರಿಯವಾಗಿದ್ದು, ಕರಾವಳಿಯಲ್ಲಿ ದುರ್ಬಲವಾಗಿತ್ತು. ಉತ್ತರ ಒಳನಾಡಿನ ಬಹುತೇಕ ಕಡೆಗಳಲ್ಲಿ, ದಕ್ಷಿಣ ಒಳನಾಡಿನ ಹಲವು ಕಡೆಗಳಲ್ಲಿ ಹಾಗೂ ಕರಾವಳಿಯ ಕೆಲವು ಕಡೆಗಳಲ್ಲಿ ಮಳೆಯಾಗಿದೆ. ರಾಜ್ಯಾದ್ಯಂತ ಮಳೆ ಹೆಚ್ಚಾಗುವ ಸಾಧ್ಯತೆಯಿದೆ. ಬೆಂಗಳೂರು ಸುತ್ತಮುತ್ತ ಮೋಡ ಕವಿದ ವಾತಾವರಣವಿದ್ದು ಅಲ್ಲಲ್ಲಿ ಮಳೆಯಾಗಿದೆ. ಒಂದೆರಡು ಸ್ಥಳಗಳಲ್ಲಿ ಬಿರುಗಾಳಿ ಸಹಿತ ಮಳೆಯಾಗುವ ಸಂಭವವಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

><><><><><><><><><